**ಸಾಕ್ಷಿಗೆ ದಿನಾಂಕಃ 13-07-2026 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಪ್ರತಿವಾದಿ ಪರವಾಗಿ ಶ್ರೀ ಹೆಚ್.ಕೆ ವಕೀಲರಿಂದಃ**

ಈ ದಾವೆಯಲ್ಲಿ ನಾನು ಸಲ್ಲಿಸಿರುವ ಪ್ರತಿವಾದ ಪತ್ರಕ್ಕೆ ಪೂರಕವಾಗಿ ನಾನು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಗಳನ್ನು ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಡಿ.–1 | ಎ.ಡಿ.ಎಲ್.ಆರ್ ರವರ ಆದೇಶದ ದೃಢಿಕೃತ ನಕಲು |
| ನಿ.ಡಿ.–2 ಮತ್ತು 3 | ಆಕಾರ್ ಬಂದ್ ಉತ್ತಾರು |
| ನಿ.ಡಿ.–4 | ಟಿಪ್ಪಣಿ ಪುಸ್ತಕ |
| ನಿ.ಡಿ.–5 ರಿಂದ 20 | ಪಹಣಿಗಳು |

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ವಜಾ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**